For More Job News Visit : www.kpscvaani.com

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ವಿಜಯಪುರ.

ಅಧಿಸೂಚನೆ ಸಂಖ್ಯೆಃ 02/2021
ದಿನಾಂಕಃ 26-10-2021.

***

ಆನ್‌ಲೈನ್ ಅರ್ಜಿ ಸಲ್ಲಿಸಲು ಆರಂಭವಾಗುವ ದಿನಾಂಕ : 30/10/2021
ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ:30/11/2021
ಸಮಯಃ ರಾತ್ರಿ 11.59 ಗಂಟೆಯವರೆಗೆ.

ಭಾರತೀಯ ಸ್ಟೇಟ್ ಬ್ಯಾಂಕ್ ಚಲನ್ ಮುಖಾಂತರ ಶುಲ್ಕ ಪಾವತಿಸಲು ಕಡೆಯ ದಿನಾಂಕಃ 03-12-2021. (ಚಲನ್ ಮುಖಾಂತರ ಶುಲ್ಕ ಪಾವತಿಸುವಂತಹ ಅಭ್ಯರ್ಥಿಗಳಿಗೆ ಮಾತ್ರ)

ವಿಷಯಃ ಶೀಘ್ರಲಿಪಿಗಾರ ಗ್ರೇಡ್-III 5-ಹುದ್ದೆಗಳಿಗೆ ನೇಮಕಾತಿ ಮಾಡುವ ಬಗ್ಗೆ.

ಉಲ್ಲೇಖಃ(1) ಮಾನ್ಯ ಉಚ್ಚ ನ್ಯಾಯಾಲಯ ಪತ್ರ ಸಂಖ್ಯೆಃ ಎಲ್‌ಸಿಎ-2-128/2012 ದಿನಾಂಕ 21/1/2013 ಮತ್ತು 13/2/2017.

(2) ಸರಕಾರದ ಆದೇಶ ಸಂಖ್ಯೆ ಎಲ್‌ಎಡಬ್ಲೂ-137 ಎಲ್‌ಸಿಇ 2014, ದಿನಾಂಕ 26/3/2015 ಮತ್ತು ದಿನಾಂಕ 28/3/2016.

(3) ಸರಕಾರದ ಆದೇಶ ಸಂಖ್ಯೆ ಎಲ್‌ಎಡಬ್ಲೂ-132 ಎಲ್‌ಸಿಇ 2014, ದಿನಾಂಕ 25/5/2016.

(4) ಜಿಲ್ಲಾ ನ್ಯಾಯಾಲಯ, ವಿಜಯಪುರ ಅಧಿಸೂಚನೆ ಸಂಖ್ಯೆಃ 1/2018 ದಿನಾಂಕಃ 03.01.2018 (ಹುದ್ದೆಗಳ ಸಂಖ್ಯೆ-05).

(5) ಜಿಲ್ಲಾ ನ್ಯಾಯಾಲಯ, ವಿಜಯಪುರ ಅಧಿಸೂಚನೆ ಸಂಖ್ಯೆಃ 5/2018 ದಿನಾಂಕಃ 13.12.2018 (ಹುದ್ದೆಗಳ ಸಂಖ್ಯೆ-04).

(6) ಮಾನ್ಯ ಉಚ್ಚ ನ್ಯಾಯಾಲಯ ಪತ್ರ ಸಂಖ್ಯೆಃ ಎಲ್‌ಸಿಎ-2-128/2012 (/ಜಿ) ದಿನಾಂಕ 05/07/2019.

(7) ಜಿಲ್ಲಾ ನ್ಯಾಯಾಲಯ, ವಿಜಯಪುರ ಅಧಿಸೂಚನೆ ಸಂಖ್ಯೆಃ 1/2019 ದಿನಾಂಕಃ 25.09.2019 (ಹುದ್ದೆಗಳ ಸಂಖ್ಯೆ: 5+4).

(8) ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಖಿತ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2021. ಸಂಖ್ಯೆ.ಲಾ 166 ಎಲ್‌ಎಸಿ 2015 ದಿನಾಂಕಃ 06.03.2021.

(9) ಈ ಕಚೇರಿ ಟಿಪ್ಪಣಿ ದಿನಾಂಕಃ 07.10.2021 ಹಾಗೂ ಅದರ ಮೇಲೆ ಅದ ಆದೇಶ.

***

For More Job News Visit : www.kpscvaani.com

ಉಲ್ಲೇಖ 4, 5 ಹಾಗೂ 7ರಲ್ಲಿ ನಮೂದಿಸಿದ ಜಿಲ್ಲಾ ನ್ಯಾಯಾಲಯ, ವಿಜಯಪುರ ಶೀಘ್ರಲಿಪಿಗಾರರ ನೇಮಕಾತಿ ಅಧಿಸೂಚನೆಗಳ ಸಂಖ್ಯೆ: 1/2018, ದಿನಾಂಕ: 03.01.2018, ಸಂಖ್ಯೆ: 5/2018 ದಿನಾಂಕ: 13.12.2018 ಹಾಗೂ ಸಂಖ್ಯೆ: 01/2019 ದಿನಾಂಕ: 25.09.2019 ರ ಮುಂದುವರೆದ ಭಾಗವಾಗಿ, ಮೇಲ್ಕಂಡ ಅಧಿಸೂಚನೆ ಸಂಖ್ಯೆ: 2/2021 ದಿನಾಂಕ:26-10-2021 ರನ್ವಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ವಿಜಯಪುರ ಹಾಗೂ ವಿಜಯಪುರ ಜಿಲ್ಲೆಯ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ ಶೀಘ್ರಲಿಪಿಗಾರ ಗ್ರೇಡ್-III 5-ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ **ಆನ್‌ಲೈನ್ ಮುಖಾಂತರ** ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ವಿಜಯಪುರ ಜಿಲ್ಲಾ ನ್ಯಾಯಾಲಯದ ವೆಬ್ ಸೈಟ್ https://districts.ecourts.gov.in/vijayapura-onlinerecruitment ಲಿಂಕ್ ಮೂಲಕ ಸಲ್ಲಿಸತಕ್ಕದ್ದು.

1) ಶೀಘ್ರಲಿಪಿಗಾರ ಗ್ರೇಡ್-III (Stenographer Grade-III) :-
(ಬ್ಯಾಕಲಾಗ್) ಹುದ್ದೆಗಳ ಸಂಖ್ಯೆ - 02.
ವೇತನ ಶ್ರೇಣಿ: 27650-650-29600-750-32600-850-36000-950-39800-1100-46400-1250-52650.

ಹುದ್ದೆಗಳ ವರ್ಗೀಕರಣ: (ಬ್ಯಾಕಲಾಗ್) -02

ವರ್ಗ	ಮಹಿಳೆ	ಗ್ರಾಮೀಣ	ಯೋ.ನಿ.ಅ.	ಮಾ.ಸೈ.	ಅಂ.ಅ	ಕ.ಮಾ.ಅ.	ಇತರೆ	ಒಟ್ಟು
ಪ.ಜಾ.	—	01	—	—	—	—	—	01
ಪ.ಪಂ.	01	—	—	—	—	—	—	01
ಒಟ್ಟು	01	01	—	—	—	—	—	02

2) ಶೀಘ್ರಲಿಪಿಗಾರ ಗ್ರೇಡ್-III (Stenographer Grade-III) :-
ಹುದ್ದೆಗಳ ಸಂಖ್ಯೆ - 03.
ವೇತನ ಶ್ರೇಣಿ: 27650-650-29600-750-32600-850-36000-950-39800-1100-46400-1250-52650.

For More Job News Visit : www.kpscvaani.com

ಹುದ್ದೆಗಳ ವರ್ಗೀಕರಣ: 03.

ವರ್ಗ	ಮಹಿಳೆ	ಗ್ರಾಮೀಣ	ಯೋ.ನಿ.ಅ.	ಮಾ.ಸೈ.	ಅಂ.ಅ	ಕ.ಮಾ.ಅ.	ಇತರೆ	ಒಟ್ಟು
ಸಾಮಾನ್ಯ	--	01	--	--	--	--	--	01
ಪ್ರವರ್ಗ-2ಎ	--	01	--	--	--	--	--	01
ಪ್ರವರ್ಗ-3ಎ	01	--	--	--	--	--	--	01
ಒಟ್ಟು	01	02	--	--	--	--	--	03

ವಿವರಣೆ:

ಯೋ.ನಿ.ಅ – ಯೋಜನಾ ನಿರಾಶ್ರಿತ ಅಭ್ಯರ್ಥಿ
ಮಾ.ಸೈ. – ಮಾಜಿ ಸೈನಿಕ
ಅಂ.ಅ – ಅಂಗವಿಕಲ ಅಭ್ಯರ್ಥಿ
ಕ.ಮಾ.ಅ. – ಕನ್ನಡ ಮಾಧ್ಯಮ ಅಭ್ಯರ್ಥಿ

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಅಂಗವಿಕಲ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ವಿದ್ಯಾರ್ಹತೆ : (ಎ) ಅರ್ಜಿ ಸಲ್ಲಿಸಲು ನಿಗದಿ ಪಡಿಸಿರುವ ಕಡೆಯ ದಿನಾಂಕದ ಒಳಗಾಗಿ ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ನಡೆಸುವ ದ್ವಿತೀಯ ಪಿ.ಯು.ಸಿ. ಅಥವಾ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರ್ಯಾಕ್ಟಿಸ್ (Diploma in Commercial Practice) ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

(ಬಿ) ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪ್ರೌಢ ದರ್ಜೆ (Senior Grade) ಹಾಗೂ ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಪ್ರೌಢ ದರ್ಜೆ (Senior Grade) ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರ್ಯಾಕ್ಟಿಸ್ (Diploma in Commercial Practice) ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಹೊಂದಿರಬೇಕು.

For More Job News Visit : www.kpscvaani.com

ಅರ್ಹತಾ ಪರೀಕ್ಷೆ :(ಎ)ಅಭ್ಯರ್ಥಿಗಳಿಗೆ ಇಂಗ್ಲೀಷ್ ಭಾಷೆಯಲ್ಲಿ ಒಂದು ನಿಮಿಷಕ್ಕೆ 120 ಪದಗಳ ವೇಗದಲ್ಲಿ 5 ನಿಮಿಷಗಳ ಉಕ್ತಲೇಖನ ನೀಡಲಾಗುವುದು, ಅದನ್ನು ಬೆರಳಚ್ಚು ಯಂತ್ರ/ಕಂಪ್ಯೂಟರ್ ಮೇಲೆ 45 ನಿಮಿಷಗಳಲ್ಲಿ ಲಿಪ್ಯಂತರ ಮಾಡಬೇಕು.

(ಬಿ)ಅಭ್ಯರ್ಥಿಗಳಿಗೆ ಕನ್ನಡ ಭಾಷೆಯಲ್ಲಿ ಒಂದು ನಿಮಿಷಕ್ಕೆ 260 ಅಕ್ಷರಗಳ ವೇಗದಲ್ಲಿ 5 ನಿಮಿಷಗಳ ಉಕ್ತಲೇಖನ ನೀಡಲಾಗುವುದು, ಅದನ್ನು ಬೆರಳಚ್ಚು ಯಂತ್ರ/ಕಂಪ್ಯೂಟರ್ ಮೇಲೆ 45 ನಿಮಿಷಗಳಲ್ಲಿ ಲಿಪ್ಯಂತರ ಮಾಡಬೇಕು.

ಆಯ್ಕೆಯ ವಿಧಾನ: 1. ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007 ಹಾಗೂ 2021 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

2.ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಅರ್ಹತಾ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳನ್ನು 1:5 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು.

3. ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಶೇಕಡಾವಾರು ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಸೂಚನೆ: **ಅಭ್ಯರ್ಥಿಗಳು ಕಂಪ್ಯೂಟರ್‌ನಲ್ಲಿ ಬೆರಳಚ್ಚು ಮಾಡುವ ಜ್ಞಾನವನ್ನು ಹೊಂದಿರಬೇಕಾಗುತ್ತದೆ.**

ವಯೋಮಿತಿ : ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ 18 ವರ್ಷ ವಯೋಮಿತಿ ಹೊಂದಿರಬೇಕು ಹಾಗೂ ಈ ಕೆಳಗೆ ತಿಳಿಸಿರುವಂತೆ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

(ಎ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ-1 ರ ಅಭ್ಯರ್ಥಿಗಳಿಗೆ ಸಂಬಂಧಿಸಿದ ಪ್ರಾಧಿಕಾರ ನೀಡುವ ಜಾತಿ ದೃಢೀಕರಣ ಪತ್ರ ಹೊಂದಿದ್ದಲ್ಲಿ ಗರಿಷ್ಠ 40 ವರ್ಷ.

(ಬಿ) ಪ್ರವರ್ಗ 2-ಎ, 2-ಬಿ, 3-ಎ ಮತ್ತು 3-ಬಿ ಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಸಂಭಂಧಿಸಿದ ಪ್ರಾಧಿಕಾರ ನೀಡುವ ಜಾತಿ ದೃಢೀಕರಣ ಪತ್ರ ಹೊಂದಿದ್ದಲ್ಲಿ ಗರಿಷ್ಠ-38 ವರ್ಷ.

(ಸಿ) ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 35 ವರ್ಷ.

For More Job News Visit : www.kpscvaani.com

ವಯೋಮಿತಿ ಸಡಿಲಿಕೆ :

1 ಮಾಜಿ ಸೈನಿಕರಿಗೆ ಗರಿಷ್ಠ ವಯೋಮಿತಿಯಲ್ಲಿ ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ.

2 ವಿಧವೆಯರು, ಜೀತಕಾರ್ಮಿಕರು ಮತ್ತು ಅಂಗವಿಕಲರು ಸಂಬಂಧಿಸಿದ ಪ್ರಾಧಿಕಾರಗಳು ನೀಡುವ ಪ್ರಮಾಣ ಪತ್ರ ಹೊಂದಿದ್ದಲ್ಲಿ ವಯೋಮಿತಿಯಲ್ಲಿ ಗರಿಷ್ಠ 10 ವರ್ಷಗಳ ಸಡಿಲಿಕೆ ನೀಡಲಾಗುವುದು. 'ಜೀತ ಕಾರ್ಮಿಕರು' ಎಂದರೆ Bonded Labour System (Abolition) Act 1976 (Central Act 19 of 1976) ಅಥವಾ Karnataka Bonded Labour System (Abolition) Ordinance 1975 ರ ಅಡಿಯಲ್ಲಿ ಮಾಡಲಾದ ನಿಯಮಗಳ ಮೇರೆಗೆ ಜೀತ ಕಾರ್ಮಿಕ ಪದ್ಧತಿಯಿಂದ ಮುಕ್ತನಾದ ವ್ಯಕ್ತಿ.

3 ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳ ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

4 ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದರೆ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

5 ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

6 ಅಭ್ಯರ್ಥಿಗಳು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಪ್ರದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ ವರ್ಷಗಳು.

ಅರ್ಜಿ ಸಲ್ಲಿಸುವ ವಿಧಾನ:

ನಿಗದಿತ ಅರ್ಜಿ ಶುಲ್ಕ, ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ:

ಸಾಮಾನ್ಯ ವರ್ಗ, ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ.	ರೂ.200-00
ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ.	ರೂ.100-00

For More Job News Visit : www.kpscvaani.com

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/vijayapura-onlinerecruitmentರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ State Bank Collect ಮೂಲಕ online payment through net banking/credit card/debit card/challan download ಸೌಲಭ್ಯದ ಮೂಲಕ ದಿನಾಂಕಃ 30.11.2021 ರವರೆಗೆ ಪಾವತಿ ಮಾಡಬಹುದಾಗಿದೆ.

ಈ ರೀತಿ net banking/credit card/debit card ಸೌಲಭ್ಯದ ಮೂಲಕ ಶುಲ್ಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ printout ಅನ್ನು ಪಡೆದುಕೊಂಡು ಎಸ್.ಬಿ.ಐ. ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು.

ಚಲನ್ ಮೂಲಕ ಶುಲ್ಕ ಪಾವತಿಸಲು ಬ್ಯಾಂಕಿನ ಕೆಲವು ನಿರ್ಬಂಧಗಳು ಇರುವ ಕಾರಣ ಎಲ್ಲ ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅಂದರೆ net banking/credit card/debit card ಸಹಾಯದಿಂದ ಹಣ ಪಾವತಿಸಲು ಪ್ರಥಮ ಪ್ರಾಶಸ್ತ್ಯವನ್ನು ನೀಡತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್ ಃ ಪೋಸ್ಟಲ್ ಆರ್ಡರ್ ಃ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಸೂಚನೆ:- ಚಲನ್ ಮುಖಾಂತರ ಶುಲ್ಕ ಪಾವತಿಸುವಂತಹ ಅಭ್ಯರ್ಥಿಗಳಿಗೆ ಮಾತ್ರ ಶುಲ್ಕ ಪಾವತಿಸಲು ಕಡೆಯ ದಿನಾಂಕಃ 03-12-2021. ON-LINE ಮೂಲಕ ಪಾವತಿಸಿದಂತಹ ಶುಲ್ಕವನ್ನು ಸ್ವೀಕರಿಸುವುದಿಲ್ಲ.

ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1 ಅಭ್ಯರ್ಥಿಗಳು ಅರ್ಜಿಯನ್ನು **ON-LINE** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2 ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಹಾಗೂ ಇ-ಮೇಲ್ ಐಡಿಯನ್ನು ಕಡ್ಡಾಯವಾಗಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

3 ಅರ್ಹ ಅಭ್ಯರ್ಥಿಗಳಿಗೆ SMS/ E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ / ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ / ಅರ್ಹತಾ ಪರೀಕ್ಷೆಗೆ ಕರೆಯಲಾಗುವುದು.

For More Job News Visit : www.kpscvaani.com

4 ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 cm ಉದ್ದ x 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆ ಮೀರಿರಬಾರದು ಹಾಗೂ ಅದು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 cm ಉದ್ದ x 7.5 cm ಅಗಲವುಳ್ಳದ್ದಾಗಿರಬೇಕು ಮತ್ತು 26kb ಅಳತೆ ಮೀರಿರಬಾರದು ಹಾಗೂ ಅದು .jpg ನಮೂನೆಯಲ್ಲಿರಬೇಕು.) ಅಪ್‌ಲೋಡ್ ಮಾಡಬೇಕು.

5 ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು download ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

6 ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

7 ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು/ಸಲ್ಲಿಸಲು ದಿನಾಂಕಃ 30–11–2021 ರ ರಾತ್ರಿ 11.59 ರವರೆಗೆ ಅವಕಾಶವಿರುತ್ತದೆ.

8 ಸೇವಾ ನಿರತ ಅಭ್ಯರ್ಥಿಗಳು ಅರ್ಜಿಗಳ ಸ್ವೀಕೃತಿಗಾಗಿ ನಿಗದಿಪಡಿಸಲಾದ ದಿನಾಂಕ ಹಾಗೂ ಸಮಯವನ್ನು ಮೀರದಂತೆ ಆನ್‌ಲೈನ್‌ನಲ್ಲಿ ತಮ್ಮ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಮತ್ತು ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡಲಾದ "ನಿರಾಕ್ಷೇಪಣಾ ಪ್ರಮಾಣಪತ್ರ" ವನ್ನು ಅರ್ಜಿ ಸ್ವೀಕೃತಿಯ ಕಡೆಯ ದಿನಾಂಕದೊಳಗೆ ಹೊಂದಿರತಕ್ಕದ್ದು.

9 ಆನಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

For More Job News Visit : www.kpscvaani.com

ಇತರ ಸೂಚನೆಗಳು:

1 ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕೋರಬಯಸುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

2 ಅರ್ಹತಾ ಪರೀಕ್ಷೆಯ/ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ/ವರ್ಗಾವಣೆ ಪ್ರಮಾಣಪತ್ರ/ ಬೆರಳಚ್ಚು ಹಾಗೂ ಶೀಘ್ರಲಿಪಿ ಪರೀಕ್ಷೆಯ ಪ್ರಮಾಣಪತ್ರಗಳು) ಜಾತಿ ಪ್ರಮಾಣ ಪತ್ರ, ಗ್ರಾಮೀಣ : ಮಾಜಿ ಸೈನಿಕರು: ಯೋ.ನಿ.ಅ.: ಅಂ.ಅ.: ಕ.ಮಾ.ಅ. ಸಂಬಂಧಿಸಿದಂತೆ ಮೀಸಲಾತಿ ಕೋರಿದ ಅಭ್ಯರ್ಥಿಗಳು ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ತಪ್ಪೆಂದು ಕಂಡು ಬಂದಲ್ಲಿ, ಆಗ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ತಪ್ಪು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹ ಗುರಿಯಾಗಬೇಕಾಗುತ್ತದೆ.

3 ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ'ಯಲ್ಲಿ , ಪ್ರವರ್ಗ-1 ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ, ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಅರ್ಜಿ ಸ್ವೀಕೃತಿಯ ಕಡೆಯ ದಿನಾಂಕದೊಳಗೆ ಹೊಂದಿರತಕ್ಕದ್ದು ಹಾಗೂ ಕೇಳಿದಾಗ ಸಲ್ಲಿಸಬೇಕು. ಅರ್ಜಿ ಸ್ವೀಕೃತಿಯ ಕಡೆಯ ದಿನಾಂಕದ ನಂತರ ಪಡೆದ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು ಹಾಗೂ ಅಂತಹವರ ಅಭ್ಯರ್ಥಿಕೆಯನ್ನು ರದ್ದುಪಡಿಸಲಾಗುವುದು.

4 ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ/96/ಸೇನನಿ/2005, ದಿನಾಂಕ 10-08-2005 ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಅರ್ಜಿ ಸ್ವೀಕೃತಿಯ ಕಡೆಯ ದಿನಾಂಕದೊಳಗೆ ಇಟ್ಟುಕೊಳ್ಳತಕ್ಕದ್ದು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

5 ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2 ರ ಜೊತೆ ನಮೂನೆ-1ರಲ್ಲೂ ದೃಢೀಕರಣ ಪತ್ರವನ್ನು ಹೊಂದಿರಬೇಕು.

For More Job News Visit : www.kpscvaani.com

6 ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿರಬೇಕು ಹಾಗೂ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಇಟ್ಟುಕೊಳ್ಳತಕ್ಕದ್ದು.

7 ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19-11-2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆಃ ಸಿಆಸುಇ/115/ಸೇನನಿ/2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

8 ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/44/ಸೇನನಿ/2001, ದಿನಾಂಕ:27-07-2001ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

9 ಶೀಘ್ರಲಿಪಿಗಾರರ ಹುದ್ದೆಗಳಿಗೆ ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ-ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುವುದು.

10 ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು ಹಾಗೂ ಸಂದರ್ಶನದ ಬಗ್ಗೆ ಮಾಹಿತಿ ಬರದಿರುವ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಲ್ಲವೆಂದು ಭಾವಿಸಿಕೊಳ್ಳತಕ್ಕದ್ದು.

11 ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.

12 ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ನಿಗದಿತ ಅರ್ಜಿ ನಮೂನೆಗಳಲ್ಲಿ ಅರ್ಜಿ ಸಲ್ಲಿಸತಕ್ಕದ್ದು.

13 ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಯಿಂದ ಅನರ್ಹಗೊಳಿಸಲಾಗುವುದು.

14 ಅಭ್ಯರ್ಥಿಗಳು ಭಾರತೀಯ ನಾಗರಿಕರಾಗಿರತಕ್ಕದ್ದು.

15 ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

For More Job News Visit : www.kpscvaani.com

16 ಶೀಘ್ರಲಿಪಿಗಾರರ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಕಂಪ್ಯೂಟರ ಸಾಕ್ಷರತಾ ಪರೀಕ್ಷೆ ನಿಯಮ–2012 ರಂತೆ (ಕಾಲಕಾಲಕ್ಕೆ ಅನುಮೋದಿಸಿದ ತಿದ್ದುಪಡಿಗಳೊಂದಿಗೆ) ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ನಿಗದಿಪಡಿಸಿದ ಅವಧಿಯೊಳಗೆ ಸರ್ಕಾರವು ಅನುಮೋದಿಸಿದ ಏಜೆನ್ಸಿ ಮುಖಾಂತರ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನಿರ್ದಿಷ್ಟಪಡಿಸಿದ ಅಂಕಗಳನ್ನು ಪಡೆದು ಉತ್ತೀರ್ಣರಾಗತಕ್ಕದ್ದು.

(ಎಸ್.ಎನ್.ನಾಯಕ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ವಿಜಯಪುರ.

ಪ್ರತಿಯನ್ನು :– ಮಾನ್ಯ ಮಹಾವಿಲೇಖನಾಧಿಕಾರಿ, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರುರವರಿಗೆ ಮುಖಪತ್ರದೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.

ಪ್ರತಿಯನ್ನು:

1 ಪ್ರಧಾನ ನಗರ ವ್ಯವಹಾರ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ದಕ್ಷಿಣ ಕನ್ನಡ ಮಂಗಳೂರು, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಚಾಮರಾಜನಗರ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಧಾರವಾಡ, ಗದಗ, ಕಲಬುರಗಿ, ಹಾಸನ, ಹಾವೇರಿ, ಕಾರವಾರ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉಡುಪಿ, ಯಾದಗಿರಿ ಇವರಿಗೆ ಮಾಹಿತಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.
2 ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು–59 ಇವರಿಗೆ ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ.
3 ನ್ಯಾಯಾಧೀಶರು, ಕುಟುಂಬ ನ್ಯಾಯಾಲಯ, ವಿಜಯಪುರ.
4 ಅಧ್ಯಕ್ಷಾಧೀಕಾರಿಗಳು, ಕಾರ್ಮಿಕ ನ್ಯಾಯಾಲಯ, ವಿಜಯಪುರ.
5 ಹಿರಿಯ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಮ್. ವಿಜಯಪುರ.
6 ಪ್ರಧಾನ ಸಿವಿಲ್ ನ್ಯಾಯಾಧೀಶರು, ವಿಜಯಪುರ.
7 ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ, ವಿಜಯಪುರ.
8 ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ.ಇಂಡಿ/ಸಿಂದಗಿ/ ಬಸವನ– ಬಾಗೇವಾಡಿ/ ಮುದ್ದೇಬಿಹಾಳ.
9 ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ.ಇಂಡಿ/ಸಿಂದಗಿ/ಬಸವನ ಬಾಗೇವಾಡಿ / ಮುದ್ದೇಬಿಹಾಳ.

For More Job News Visit : www.kpscvaani.com

10 ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು.

11 ಉಪನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ವಿಜಯಪುರ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ : ವಿವಿಧ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸುವಂತೆ ಕೋರಲಾಗಿದೆ.

12 ಆಯುಕ್ತರು ಮತ್ತು ವಾರ್ತಾ ಇಲಾಖೆ, ನಂ.17, ಭಗವಾನ್ ಮಹಾವೀರ ಜೈನ್ (ಇನ್‌ಫಂಟ್ರಿ) ರಸ್ತೆ, ಬೆಂಗಳೂರು–560 001– ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.

13 ಈ ನ್ಯಾಯಾಲಯದ ಸೂಚನಾಫಲಕಕ್ಕಾಗಿ.

ನ್ಯಾಯಾಲಯದ ಆದೇಶದ ಮೇರೆಗೆ,

ಮುಖ್ಯ ಆಡಳಿತಾಧಿಕಾರಿಗಳು,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ವಿಜಯಪುರ.